ಮಳೆ ಮಾಪನ ಕೇಂದ್ರಗಳು

2038(2467) ಶ್ರೀ ಚೆಲುವರಾಯಸ್ವಾಮಿ ಎನ್. (ನಾಗಮಂಗಲ)

ಅ) ರಾಜ್ಯದಲ್ಲಿ ಈಗ ಇರುವ ಮಳೆ ಮಾಪನ ಕೇಂದ್ರಗಳ ಸಂಖ್ಯೆ ಎಷ್ಟು; ಪ್ರತಿ ಗ್ರಾಮಪಂಚಾಯಿತಿಗೆ ಒಂದರಂತೆ ಮಳೆ ಮಾಪನ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ; ಈ ಬಗ್ಗೆ ಕಾರ್ಯಯೋಜನೆಯನ್ನು ರೂಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕ್ರಿಯಾಯೋಜನೆ ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

ಆ) ಮಳೆ ಮಾಪನ ಕೇಂದ್ರಗಳ ಸ್ಥಾಪನೆಯಿಂದ, ಆ ಪ್ರದೇಶದಲ್ಲಿ ಬೀಳುವ ಮಳೆಯ ಪ್ರಮಾಣವನ್ನು ಸರಿಯಾಗಿ ಅಳತೆ ಮಾಡಿ ಕೃಷಿ ಮತ್ತು ಬರಗಾಲ ಪರಿಹಾರ ಯೋಜನೆಗಳನ್ನು ರೂಪಿಸಲು ಸಹಕಾರಿಯಾಗುವುದಿಲ್ಲವೇ?

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ & ತಂತ್ರಜ್ಞಾನ ಸಚಿವರು)

ಅ) ರಾಜ್ಯದಲ್ಲಿ ಈಗಾಗಲೇ 2704 ಟೆಲಿಮೆಟ್ರಿಕ್ ಮಳೆಮಾಪನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಹಾಗೂ ಉಳಿದ 3131 ಗ್ರಾಮ ಪಂಚಾಯತಿಗಳಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕ್ರಿಯಾಯೋಜನೆ ರೂಪಿಸಿ, ಟೆಲಿಮೆಟ್ರಿಕ್ ಮಳೆಮಾಪನ ಕೇಂದ್ರಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಟೆಲಿಮೆಟ್ರಿಕ್ ಮಳೆಮಾಪನ ಕೇಂದ್ರಗಳಿಂದ ಸರಿಯಾದ ಸಮಯದಲ್ಲಿ ನಿಖರವಾದ ಮಳೆ ಮಾಹಿತಿಯು ಲಭ್ಯವಾಗುತ್ತದೆ. ಈ ಮಾಹಿತಿಯನ್ನು ಆಧರಿಸಿ ಬರ ಶಮನ ಯೋಜನೆಗಳನ್ನು ರೂಪಿಸಲು ಅನುಕೂಲವಾಗುತ್ತದೆ.